## 2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು

## ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ.

**ದಿಃ 12.06.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಪಾಟೀ ಸವಾಲುಃ 2 ನೇ ಎದುರುದಾರ ಪರ ವಕೀಲರಿಂದಃ**

ನಾನು ಪದವಿಧರನಾಗಿದ್ದೇನೆ. ನನ್ನ ಮುಖ್ಯ ವಿಚಾರಣೆ ಪ್ರಮಾಣಪತ್ರ ಸಲ್ಲಿಸಲು ನಮ್ಮ ವಕೀಲರೇ ಮಾಹಿತಿ ನೀಡಿರುತ್ತಾರೆ. ನನ್ನ ಪ್ರಮಾಣಪತ್ರದಲ್ಲಿರುವ ವಿಷಯ ನನಗೆ ವೈಯ್ಯಕ್ತಿಕವಾಗಿ ಗೊತ್ತಿಲ್ಲ ಎಂದರೆ ಸರಿಯಲ್ಲ. ನಾನು ಅಸಲು ದಾವೆ ನಂ.781/2025 ನ್ನು 5 ನೇ ಹೆಚ್ಚುವರಿ ದಿವಾಣಿ ನ್ಯಾಯಾಲಯ ಹುಬ್ಬಳ್ಳಿಯಲ್ಲಿ ಸಲ್ಲಿಸಿರುತ್ತೇನೆ ಎಂದರೆ ಸರಿ. ಸದರಿ ದಾವೆಯಲ್ಲಿ ನಾನು ನಿರ್ಬಂಧಕಾಜ್ಞೆ ಕೇಳಿ ಸಲ್ಲಿಸಿದ ಮಧ್ಯಂತರ ಅರ್ಜಿ ವಜಾಗೊಂಡ ದಿನವೇ ಅದು ನನಗೆ ಗೊತ್ತಾಗಿರುತ್ತದೆ ಎಂದರೆ ಸರಿ. ಸದರಿ ಅರ್ಜಿ ವಜಾ ಆದ ದಿನವೇ ದೃಢಿಕೃತ ಪ್ರತಿ ಪಡೆಯಲು ಅರ್ಜಿ ಸಲ್ಲಿಸಲು ನಿಮಗೆ ತೊಂದರೆ ಇರಲಿಲ್ಲ ಎಂದರೆ ಸಾಕ್ಷಿ ಆ ಬಗ್ಗೆ ನನಗೆ ಗೊತ್ತಿರಲಿಲ್ಲ ಎಂದು ನುಡಿಯುತ್ತಾರೆ. ನಾನು ಉದ್ದೇಶಪೂರ್ವಕವಾಗಿ ಎದುರುದಾರರಿಗೆ ತೊಂದರೆ ನೀಡುವ ಉದ್ದೇಶದಿಂದ ನನಗೆ ವಿಷಯ ಗೊತ್ತಿದ್ದರು ತಡವಾಗಿ ಅರ್ಜಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

2. ನನಗೆ ಆರೋಗ್ಯ ಸರಿ ಇಲ್ಲ ಎಂದು ನಾನು ಹೇಳುತ್ತಿದ್ದು ನಾನು ಚಿಕಿತ್ಸೆ ಪಡೆದುಕೊಂಡಿರುತ್ತೇನೆ. ನಾನು ಊರಲ್ಲಿ ಚಿಕಿತ್ಸೆ ಪಡೆದಿರುತ್ತೇನೆ ಆದರೆ ಆ ಬಗ್ಗೆ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರಪಡಿಸಿರುವುದಿಲ್ಲ. ಸದರಿ ದಾಖಲೆಗಳನ್ನು ಹಾಜರಪಡಿಸಲು ನನಗೆ ತೊಂದರೆ ಇಲ್ಲ. ನಾನು ಆರೋಗ್ಯವಾಗಿಯೇ ಇದ್ದೇನು ಹಾಗೂ ವಿಚಾರಣಾ ನ್ಯಾಯಾಲಯದಲ್ಲಿ ಮುದ್ದತ್ತಿಗೆ ಹಾಜರಾಗುತ್ತಿದ್ದೇನು ಆದರೂ ಸಹ ನನಗೆ ಆರೋಗ್ಯ ಸರಿ ಇಲ್ಲ ಎಂದು ತಡವಾಯಿತು ಸೃಷ್ಟಿಸಿ ಹೇಳುತ್ತಿದ್ದೇನೆ ಹಾಗಾಗಿ ಆ ಬಗ್ಗೆ ಯಾವುದೇ ದಾಖಲೆಗಳು ಇಲ್ಲ ಎಂದರೆ ಸರಿಯಲ್ಲ. ಕಾಲ ವಿಳಂಬ ಮನ್ನಾ ಮಾಡಲು ಯಾವುದೇ ಸಕಾರಣಗಳನ್ನು ನಾನು ಅರ್ಜಿಯಲ್ಲಿ ನೀಡಿಲ್ಲ ಎಂದರೆ ಸರಿಯಲ್ಲ. ಮಧ್ಯಂತರ ಅರ್ಜಿಯಲ್ಲಿ ತೋರಿಸಿದ ಕಾರಣಗಳಿಗೆ ಪೂರಕವಾಗಿ ದಾಖಲೆಗಳನ್ನು ನಾನು ಸಲ್ಲಿಸಿಲ್ಲ ಎಂದರೆ ಸರಿಯಲ್ಲ. ಕಾಲವಿಳಂಬ ಆದ ಬಗ್ಗೆ ಪ್ರತ್ಯೇಕವಾದ ವಿವರಣೆ ಕೊಟ್ಟಿಲ್ಲ ಹಾಗೂ ಸುಳ್ಳು ಅರ್ಜಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಉದ್ದೇಶಪೂರ್ವಕವಾಗಿ ಎದರುದಾರರಿಗೆ ತೊಂದರೆ ನೀಡಲು ಈ ಅರ್ಜಿ ಸಲ್ಲಿಸಿರುತ್ತೇನೆಂದರೆ ಸರಿಯಲ್ಲ. ಕೆಳ ನ್ಯಾಯಾಲಯದಲ್ಲಿ ಆದೇಶ ಆದ ನಂತರ ಎದುರುದಾರರು ಮನೆ ಸಹ ಕಟ್ಟಿಕೊಂಡಿರುತ್ತಾರೆ ಸದರಿ ವಿಷಯ

ಗೊತ್ತಿದ್ದರೂ ಸಹ ಅವರಿಗೆ ಆರ್ಥಿಕವಾಗಿ ಮಾನಸಿಕವಾಗಿ ತೊಂದರೆ ನೀಡಿ ನಷ್ಟ ಉಂಟುಮಾಡುವ ಉದ್ದೇಶದಿಂದ ನಾನು ಪ್ರಸ್ತುತ ಅರ್ಜಿ ಸಲ್ಲಿಸಿರುತ್ತೇನೆಂದರೆ ಸರಿಯಲ್ಲ. ಎದುರುದಾರರು ಅವರದೇ ಆಸ್ತಿಯಲ್ಲಿ ದಾಖಲೆಗಳ ಪ್ರಕಾರ ಮನೆಕಟ್ಟಿಕೊಂಡಿದ್ದರೂ ಸಹ ನಾನು ಸುಳ್ಳು ಅರ್ಜಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಸುಳ್ಳು ಕಾರಣಗಳನ್ನು ತೋರಿಸಿ ಸುಳ್ಳು ಅರ್ಜಿ ಸಲ್ಲಿಸಿದ ಕಾರಣ ಅದು ಊರ್ಜಿತವಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

Sd/-

**2 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.**